**All India Radio: Bangalore**
**Regional Bulletin In Kannada**
**15.07.2026 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಕುಡಿಯಲು ಮಾತ್ರ ನೀರು ನೀಡುವಂತೆ ಕಾವೇರಿ ನಿಯಂತ್ರಣಾ ಸಮಿತಿ ಸಭೆ ಆದೇಶ - ಸಚಿವ ರಾಮಲಿಂಗಾರೆಡ್ಡಿ ಸ್ಪಷ್ಟನೆ
2. ಬಿಡದಿ ಟೌನ್‌ಶಿಪ್ ವಿವಾದ : ೨ನೇ ಹಂತದ ಭೂ ಸ್ವಾಧೀನಕ್ಕೆ ಅಂತಿಮ ಅಧಿಸೂಚನೆ ಹೊರಡಿಸಿದ ಸರ್ಕಾರ
3. ಬಿಡದಿ ಟೌನ್‌ಶಿಪ್‌ಗಾಗಿ ರೈತರ ಜಮೀನನ್ನು ಬಲವಂತವಾಗಿ ವಶಪಡಿಸಿಕೊಳ್ಳುವುದಿಲ್ಲ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
4. ಜೈಲುಗಳ ಸುಧಾರಣೆಗೆ, ಅಕ್ರಮಗಳಿಗೆ ಕಡಿವಾಣ ಹಾಕಲು ಸರ್ಕಾರ ಬದ್ಧ - ಸಚಿವ ಪ್ರಿಯಾಂಕ್ ಖರ್ಗೆ
5. ಕೊಡಗು ಜಿಲ್ಲೆಯಲ್ಲಿ ಮುಂಗಾರು ದುರ್ಬಲ ; ಬೆಂಗಳೂರು ಸೇರಿದಂತೆ ರಾಜ್ಯದೆಲ್ಲೆಡೆ ಹೆಚ್ಚಿದ ಗರಿಷ್ಠ ಉಷ್ಣಾಂಶ

<><><><>

ಕಾವೇರಿ ನೀರನ್ನು ಕುಡಿಯಲು ಮಾತ್ರ ಮೀಸಲಿಡುವಂತೆ ದೆಹಲಿಯಲ್ಲಿ ಇಂದು ನಡೆದ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ಕಾವೇರಿ ನೀರು ನಿಯಂತ್ರಣ ಸಮಿತಿ ಸಭೆ ಆದೇಶ ನೀಡಿದೆ ಎಂದು ಜಲ ಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ವಿಧಾನಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡು ಸರ್ಕಾರ ನೀರು ಬಿಡಲು ಬೇಡಿಕೆ ಇಟ್ಟಿದ್ದು, ರಾಜ್ಯದ ಅಧಿಕಾರಿಗಳು ರಾಜ್ಯದ ಸ್ಥಿತಿಗತಿ ಬಗ್ಗೆ ಮಾಹಿತಿ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ತಮಿಳುನಾಡಿಗೆ ನೀರು ಬಿಡಿ ಎಂದು ಸಿಡಬ್ಲ್ಯೂಆರ್‌ಸಿ ಆದೇಶ ನೀಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಮಂಡ್ಯ ರೈತರಿಗೆ ನೀರು ಬಿಡುಗಡೆ ಮಾಡುವ ಕುರಿತಂತೆ ಮುಖ್ಯಮಂತ್ರಿ ಜೊತೆ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಪ್ರಸ್ತುತ ತಮಿಳುನಾಡಿಗೆ ನೀರು ಬಿಡುವ ಅವಶ್ಯಕತೆ ಇಲ್ಲ ಎಂದು ತಿಳಿಸಿದ ಅವರು, ಇದೇ ೨ಲಕ್ಕೆ ಸಿಡಬ್ಲ್ಯೂಆರ್‌ಸಿ ಸಭೆ ನಡೆಯಲಿದೆ ಎಂದು ಹೇಳಿದ್ದಾರೆ.

<><><><>

ಬಿಡದಿ ಟೌನ್‌ಶಿಪ್ ಯೋಜನೆಗೆ ಪ್ರತಿಪಕ್ಷಗಳ ವಿರೋಧಗಳ ನಡುವೆಯೇ ರಾಜ್ಯ ಸರ್ಕಾರ ೨ನೇ ಹಂತದ ಭೂಸ್ವಾಧೀನ ಪ್ರಕ್ರಿಯೆಯ ಅಂತಿಮ ಅಧಿಸೂಚನೆ ಹೊರಡಿಸಿದೆ. ಈ ಮೂಲಕ ಬಿಡದಿ ಹೋಬಳಿಯ ೨ ಸಾವಿರದ ೫೫೦ ಎಕರೆ ಜಮೀನನ್ನು ಬಿಡದಿ ಟೌನ್‌ಶಿಪ್ ಯೋಜನೆಗಾಗಿ ಸ್ವಾಧೀನಪಡಿಸಿಕೊಳ್ಳಲು ಅಧಿಕೃತ ಆದೇಶ ಹೊರಡಿಸಿದೆ. ಕೆ.ಜಿ.ಗೊಲ್ಲರಪಾಳ್ಯದಲ್ಲಿ ಒಟ್ಟು ೩೧೫ ಎಕರೆ, ಬನ್ನಿಗಿರಿ ಗ್ರಾಮದಲ್ಲಿ ಒಟ್ಟು ೭೭೫ ಎಕರೆ ೬೦೦ ಗುಂಟೆ, ಅರಳಾಳುಸಂದ್ರದಲ್ಲಿ ಒಟ್ಟು ೧ ಸಾವಿರದ ೪೬೦ ಎಕರೆ ೨೧ ಗುಂಟೆ ಜಮೀನನ್ನು ಭೂಸ್ವಾಧೀನಗೊಳಿಸುವಂತೆ ಆದೇಶದಲ್ಲಿ ತಿಳಿಸಲಾಗಿದೆ.

<><><><>

ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ಬಲವಂತವಾಗಿ ಯಾವುದೇ ರೈತರ ಜಮೀನು ಪಡೆದುಕೊಳ್ಳುವುದಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ದಾಖಲೆ ಸಮೇತ ಹಲವು ಮಾಹಿತಿಗಳನ್ನು ಬಹಿರಂಗಪಡಿಸಿದ್ದಾರೆ. ಜಮೀನು ನೀಡಲು ಇಷ್ಟವಿಲ್ಲದವರು ಕೃಷಿ ಮುಂದುವರಿಸಬಹುದು ಎಂದು ತಿಳಿಸಿದ್ದಾರೆ. ಬಲವಂತವಾಗಿ ಯಾವುದೇ ರೈತರ ಒಂದು ಗುಂಟೆ ಜಮೀನನ್ನು ಪಡೆದುಕೊಳ್ಳುವುದಿಲ್ಲ ಎಂದು ಹೇಳಿದ್ದಾರೆ. ರಾಜಕೀಯ ಪ್ರೇರಿತ ಕುಮ್ಮಕ್ಕಿನಿಂದ ಅಧಿಕಾರಿಗಳಿಗೆ ತೊಂದರೆ ನೀಡಿದ್ದು, ರೈತರನ್ನು ತಪ್ಪು ದಾರಿಗೆ ಎಳೆಯುವ ಸಂಚು ನಡೆಯುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಈ ಯೋಜನೆಯನ್ನು ಎರಡು ತಿಂಗಳು ಮುಂದೂಡುವುದಾಗಿ ಹೇಳಿದ ಅವರು,

ಸಂಪುಟ ಸಭೆಯಲ್ಲಿ ತೀರ್ಮಾನಿಸಿ ಸಮಿತಿ ರಚಿಸುವ ಮೂಲಕ ಎರಡು ತಿಂಗಳಲ್ಲಿ ವರದಿ ಪಡೆಯಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಬಿಡದಿ ಟೌನ್‌ಶಿಪ್ ಯೋಜನೆಗೆ ತಾವು ಶಂಕುಸ್ಥಾಪನೆ ಮಾಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಕಲಬುರಗಿ ಕೇಂದ್ರ ಕಾರಾಗೃಹದಿಂದ ಮೂವರು ಖೈದಿಗಳು ತಪ್ಪಿಸಿಕೊಂಡ ಪ್ರಕರಣಕ್ಕೆ ಸಂಬಂಧಿಸಿದಂತೆ ನಿರ್ಲಕ್ಷ್ಯ ಮತ್ತು ಕರ್ತವ್ಯ ಲೋಪದ ಹಿನ್ನೆಲೆಯಲ್ಲಿ ಜೈಲಾಧಿಕಾರಿ ಮತ್ತು ಸಿಬಂದಿಯನ್ನು ಅಮಾನತುಗೊಳಿಸಲಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, ಈಗಾಗಲೇ ಓರ್ವ ಖೈದಿಯನ್ನು ಸೆರೆ ಹಿಡಿಯಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಜೈಲುಗಳ ಸುಧಾರಣೆ, ಭದ್ರತಾ ವ್ಯವಸ್ಥೆಯ ಉನ್ನತೀಕರಣ ಮತ್ತು ಅಕ್ರಮಗಳಿಗೆ ಕಡಿವಾಣದಂತಹ ಕ್ರಮ ಕೈಗೊಳ್ಳಲು ಸರ್ಕಾರ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಟೀಕೆ ಮಾಡುತ್ತಿರುವ ಬಿಜೆಪಿ ನಾಯಕರು ತಮ್ಮ ಅವಧಿಯಲ್ಲಿ ರಾಜ್ಯದ ಜೈಲುಗಳ ಸ್ಥಿತಿ ಹೇಗಿತ್ತು ಎಂಬುದನ್ನು ಅವಲೋಕನ ಮಾಡಿಕೊಳ್ಳಲಿ ಎಂದು ತಿಳಿಸಿದ್ದಾರೆ.

<><><><>

ಆಷಾಢ ಶುಕ್ರವಾರದಂದು ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ಭಕ್ತರಿಗೆ ಯಾವುದೇ ರೀತಿಯಲ್ಲೂ ತೊಂದರೆಯಾಗದಂತೆ ಅಗತ್ಯ ಮೂಲಭೂತಸೌಕರ್ಯ ಹಾಗೂ ವ್ಯವಸ್ಥೆಗಳನ್ನು ಕಲ್ಪಿಸಲು ಲಲಿತ ಮಹಲ್ ಹೆಲಿಪ್ಯಾಡ್‌ನಿಂದ ಚಾಮುಂಡಿ ಬೆಟ್ಟದವರೆಗೆ ಕೈಗೊಂಡಿರುವ ಪೂರ್ವಸಿದ್ಧತೆಗಳನ್ನು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಇಂದು ಪರಿಶೀಲನೆ ನಡೆಸಿದರು. ಪರಿಶೀಲನೆ ವೇಳೆ ವಾಹನ ನಿಲುಗಡೆ ವ್ಯವಸ್ಥೆ, ಭಕ್ತರಿಗಾಗಿ ವಿಶೇಷ ಬಸ್ ಸೇವೆ, ಕುಡಿಯುವ ನೀರಿನ ವ್ಯವಸ್ಥೆ, ಸರತಿ ಸಾಲು ನಿರ್ವಹಣೆಗೆ ಕೈಗೊಂಡಿರುವ ಕ್ರಮಗಳು ಹಾಗೂ ಶೌಚಾಲಯಗಳ ಸೌಲಭ್ಯಗಳನ್ನು ಪರಿಶೀಲಿಸಿದ ಸಚಿವರು ಅಧಿಕಾರಿಗಳಿಂದ ಮಾಹಿತಿ ಪಡೆದರು. ಸ್ವಚ್ಛತೆ, ಕುಡಿಯುವ ನೀರು, ಸಾರಿಗೆ, ಸರತಿ ಸಾಲಿನ ವ್ಯವಸ್ಥೆ ಹಾಗೂ ಶೌಚಾಲಯಗಳ ನಿರ್ವಹಣೆಯಲ್ಲಿ ಯಾವುದೇ ಲೋಪವಾಗದಂತೆ ಸಂಬಂಧಿಸಿದ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದ್ದಾರೆ.

<><><><>

ರಾಜ್ಯದಲ್ಲಿ ಶೇಕಡ ೭೦ ರಷ್ಟು ಮಳೆ ಕೊರತೆಯಾಗಿ ಬರಗಾಲ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ರೈತರಿಗೆ ಪ್ರತಿ ಎಕರೆಗೆ ೫೦ ಸಾವಿರ ರೂಪಾಯಿ ಪರಿಹಾರ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಒತ್ತಾಯಿಸಿದ್ದಾರೆ. ಬಳ್ಳಾರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್ ಯೋಜನೆಯನ್ನು ಕೈಬಿಡಬೇಕು ಹಾಗೂ ಪ್ರತಿಭಟನಾ ನಿರತ ರೈತರ ಮೇಲೆ ಹಾಕಿರುವ ಕೇಸುಗಳನ್ನು ಹಿಂಪಡೆಯಬೇಕೆಂದು ಆಗ್ರಹಿಸಿ ಇದೇ ೧೭ರಂದು ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಅಕ್ಟೋಬರ್ ೬ರಿಂದ ಆರಂಭವಾಗವ ವಿಧಾನ ಮಂಡಲದ ಅಧಿವೇಶನದಲ್ಲಿಯೂ ಬಿಡದಿ ಟೌನ್‌ಶಿಪ್, ಬರಗಾಲ ಕುರಿತು ಚರ್ಚೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಬಾಗಲಕೋಟೆ ನಗರದ ವಿದ್ಯಾಗಿರಿಯಲ್ಲಿ ಭಾರತೀಯ ವಿಶಿಷ್ಟ ಗುರುತಿನ ಪ್ರಾಧಿಕಾರ ವತಿಯಿಂದ ನೂತನ ಆಧಾರ ಸೇವಾ ಕೇಂದ್ರವನ್ನು ಜಿಲ್ಲಾಧಿಕಾರಿ ಸಂಗಪ್ಪ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಆಧಾರ ಹೊಸ ನೋಂದಣಿ, ತಿದ್ದುಪಡಿ, ಮೊಬೈಲ್ ಸಂಖ್ಯೆ ಹಾಗೂ ವಿಳಾಸ ಬದಲಾವಣೆ ಸೇರಿದಂತೆ ವಿವಿಧ ಸೇವೆಗಳು ಒಂದೇ ಸ್ಥಳದಲ್ಲಿ ಲಭ್ಯವಾಗುವುದರಿಂದ ಸಾರ್ವಜನಿಕರಿಗೆ ವೇಗವಾಗಿ ಮತ್ತು ಸುಲಭವಾಗಿ ಸೇವೆ ದೊರೆಯಲಿದೆ ಎಂದು ತಿಳಿಸಿದರು. ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಆಧಾರ ಪ್ರಮುಖ ದಾಖಲೆಯಾಗಿರುವುದರಿಂದ ನಾಗರಿಕರು ಈ ಕೇಂದ್ರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು. ಆಧಾರ ಸೇವಾ ಕೇಂದ್ರದ ಕ್ಲಸ್ಟರ್ ವ್ಯವಸ್ಥಾಪಕ ಶ್ಯಾಮಸುಂದರ್ ಮಾತನಾಡಿ, ೫ರಿಂದ ೧೭

ವರ್ಷದ ಮಕ್ಕಳ ಕಡ್ಡಾಯ ಬಯೋಮೆಟ್ರಿಕ್ ನವೀಕರಣವನ್ನು ಸೆಪ್ಟೆಂಬರ್ ೩೦ರವರೆಗೆ ಉಚಿತವಾಗಿ ಮಾಡಿಕೊಡಲಾಗುತ್ತಿದ್ದು, ಈ ಸೇವೆ ಆಧಾರ ಕೇಂದ್ರ ಹಾಗೂ ಶಾಲಾ ಶಿಬಿರಗಳಲ್ಲಿ ಲಭ್ಯವಿದೆ ಎಂದು ಅವರು ಮಾಹಿತಿ ನೀಡಿದರು.

<><><><>

ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯಲ್ಲಿ ಮುಂಗಾರು ದುರ್ಬಲಗೊಂಡಿದೆ. ಮುಂಗಾರು ಬಿರುಸಾಗಬೇಕಾಗಿದ್ದ ಈ ದಿನಗಳಲ್ಲಿಯೇ ಜಿಲ್ಲೆಯಾದ್ಯಂತ ಬಿರು ಬಿಸಿಲಿನ ವಾತಾವರಣ ಕಂಡುಬಂದಿದೆ. ಕಾವೇರಿ ಉಗಮತಾಣವಾದ ತಲಕಾವೇರಿಯಲ್ಲಿಯೂ ಮಳೆ ಕ್ಷೀಣವಾಗಿದ್ದು ಕಾವೇರಿ ನದಿ ನೀರಿನ ಹರಿವಿಕೆಯಲ್ಲಿಯೂ ಇಳಿಕೆಯಾಗಿದೆ. ಮುಂಗಾರು ವಿಫಲವಾಗಿರುವುದರಿಂದ ಕೃಷಿ ಚಟುವಟಿಕೆಗಳಿಗೂ ಹಿನ್ನಡೆಯಾಗಿದೆ. ಕೆಲವು ಗ್ರಾಮಗಳಲ್ಲಿ ಕಾಫಿ ಕಾಯಿ ಗಿಡದಿಂದ ಉದುರುತ್ತಿದೆ. ಕೊಡಗಿನ ಕಿತ್ತಳೆ ಫಸಲು ಮೇಲೂ ಕ್ಷೀಣಿಸಿದ ಮುಂಗಾರಿನಿಂದ ವ್ಯತಿರಿಕ್ತ ಪರಿಣಾಮ ಉಂಟಾಗಿದೆ.

<><><><>

ರಾಜ್ಯದಲ್ಲಿ ಮಳೆ ಪ್ರಮಾಣ ಕಡಿಮೆಯಾಗಿ ಬಿಸಿಲು ಏರಿಕೆಯಾಗುತ್ತಿದೆ. ಉತ್ತರಕರ್ನಾಟಕ, ಮಲೆನಾಡು, ಕರಾವಳಿ ಹಾಗೂ ಹಳೆ ಮೈಸೂರು ಭಾಗದ ಜಿಲ್ಲೆಗಳಲ್ಲಿ ಗರಿಷ್ಠ ಉಷ್ಣಾಂಶ ಪ್ರಮಾಣದಲ್ಲಿ ಕಳೆದ ಮೂರು ದಿನಗಳಿಂದ ಏರಿಕೆಯಾಗುತ್ತಲೇ ಇದೆ. ಕರಾವಳಿ ಜಿಲ್ಲೆಗಳಲ್ಲಿ ಉಷ್ಣಾಂಶದ ಪ್ರಮಾಣ ಇಂದು ಮತ್ತು ನಾಳೆ ಏರಿಕೆಯಾಗುತ್ತಿದ್ದು, ಮುನ್ನೆಚ್ಚರಿಕಾ ಕ್ರಮವಾಗಿ ಯೆಲ್ಲೋ ಅಲರ್ಟ್ ಘೋಷಣೆ ಮಾಡಲಾಗಿದೆ. ಈ ನಡುವೆ ಬೆಂಗಳೂರಿನಲ್ಲಿಯೂ ಉಷ್ಣಾಂಶ ಏರಿಕೆಯಾಗಿದ್ದು, ಎಚ್‌ಎಎಲ್ ವಿಮಾನ ನಿಲ್ದಾಣದ ಪ್ರದೇಶದಲ್ಲಿ ೩೪ ಡಿಗ್ರಿ ಸೆಲ್ಸಿಯಸ್, ಬೆಂಗಳೂರು ನಗರದಲ್ಲಿ ೩೩.೬ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ. ಗರಿಷ್ಠ ಉಷ್ಣಾಂಶದ ಪ್ರಮಾಣ ಈ ವಾರ ಇನ್ನೂ ೩ ಡಿಗ್ರಿ ಸೆಲ್ಸಿಯಸ್‌ನಿಂದ ೪ ಡಿಗ್ರಿ ಸೆಲ್ಸಿಯಸ್ ವರೆಗೆ ಏರಿಕೆಯಾಗಬಹುದು ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><><>

ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಮುಂದುವರೆದಿದೆ. ವಿಜಯಪುರ ಜಿಲ್ಲೆಯ ಮತದಾರರ ಪಟ್ಟಿಯಲ್ಲಿ ಒಟ್ಟು ೧೯ ಲಕ್ಷದ ೮೨ ಸಾವಿರದ ೧೧೪ ಮತದಾರರಿದ್ದು, ಗಣತಿ ನಮೂನೆಗಳನ್ನು ಬಿ.ಎಲ್.ಓ.ಗಳಿಗೆ ವಿತರಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಜಿಲ್ಲಾಧಿಕಾರಿ ಡಾ.ಆನಂದ ಕೆ. ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಶೇಕಡ.೫೦.೨ರಷ್ಟು ಮಾಹಿತಿ ಗಣಕೀಕರಣ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕೆ ಎನ್ .ಅನುರಾಧ ತಿಳಿಸಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು-೧

1. ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಒಡೆಯರಪಾಳ್ಯದ ಟಿಬೇಟಿಯನ್ ಕಾಲೋನಿಯ ಸಮೀಪ ರಸ್ತೆ ಕಾಮಗಾರಿಯಲ್ಲಿ ಟೆಂಡರ್ ನಿಯಮ ಉಲ್ಲಂಘನೆ, ಗುಣಮಟ್ಟ ಪರೀಕ್ಷೆ ನಡೆಸದಿರುವುದು ಹಾಗೂ ಅಳತೆಗಳಲ್ಲಿ ವ್ಯತ್ಯಾಸಗಳಿದ್ದರೂ ಬಿಲ್ ಪಾವತಿಸಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟುಮಾಡಿದ ಆರೋಪದ ಹಿನ್ನೆಲೆಯಲ್ಲಿ ಲೋಕೋಪಯೋಗಿ ಇಲಾಖೆಯ ಇಬ್ಬರು ಅಧಿಕಾರಿಗಳನ್ನು ರಾಜ್ಯ ಸರ್ಕಾರ ಅಮಾನತುಗೊಳಿಸಿದೆ.
2. ರೈತರ ಆದಾಯ ವೃದ್ಧಿ ಹಾಗೂ ಕೃಷಿ ಸಂಬಂಧಿತ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ಬ್ಯಾಂಕುಗಳ ಮೂಲಕ ಕಿಸಾನ್ ಕ್ರೆಡಿಟ್ ಕಾರ್ಡ್ ಯೋಜನೆಯಡಿ ಪಶು ಸಂಗೋಪನೆ, ಹೈನುಗಾರಿಕೆ ಮತ್ತು ಮೀನುಗಾರಿಕೆ ಚಟುವಟಿಕೆಗಳಿಗೆ ಸಾಲ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ಈ ಸಾಲ ಸೌಲಭ್ಯವನ್ನು ಜಿಲ್ಲೆಯ ಅರ್ಹ ರೈತರು ಸದುಪಯೋಗಪಡೆಯಬೇಕೆಂದು ರಾಯಚೂರು ಜಿಲ್ಲಾ ಲೀಡ್ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕರಾದ ಸುಧೀಂದ್ರ ಪಿ.ಆರ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>